ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 24/04/2019

# ಅಫಿಡವಿಟ್‌ನಲ್ಲಿ ಮಾಹಿತಿ ಮುಚ್ಚಿಟ್ಟ ಎಚ್ಚಿಕೆ

**ವಿಕ ಸುದ್ದಿಲೋಕ** ಬೆಂಗಳೂರು

ವಿಧಾನಸಭೆ ಚುನಾವಣೆ ವೇಳೆ ಸಲ್ಲಿಸಿದ ಅಫಿಡವಿಟ್‌ನಲ್ಲಿ ಪುತ್ರ ನಿಖಿಲ್ ಕುಮಾರಸ್ವಾಮಿ, ಮತ್ತಿತರರು ಇರುವ ಮಾಹಿತಿಯನ್ನು ಮುಖ್ಯಮಂತ್ರಿ ಕುಮಾರಸ್ವಾಮಿ ಮರೆಮಾಚಿದ್ದಾರೆ ಎಂದು ಆರೋಪಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ದೂರು ಸಲ್ಲಿಕೆಯಾಗಿದೆ.

''2018ರ ವಿಧಾನಸಭೆ ಚುನಾವಣೆ ವೇಳೆ ಚನ್ನಪಟ್ಟಣ ಹಾಗೂ ರಾಮನಗರ ಕ್ಷೇತ್ರದಿಂದ ಚುನಾಯಿತರಾಗಲು ಅಫಿಡವಿಟ್ ಸಲ್ಲಿಕೆ ವೇಳೆ ಮೂವರ ಹೆಸರನ್ನು ಬಚ್ಚಿಟ್ಟಿದ್ದಾರೆ. ಸುಳ್ಳು ಹೇಳಿಕೆ ನೀಡಿರುವ ಕಾರಣ ಅವರ ವಿರುದ್ಧ ಕೇಸ್ ದಾಖಲಿಸಿ ವಿಚಾರಣೆಗೆ ಸೂಚಿಸಬೇಕು,'' ಎಂದು ವಿಶ್ವ ಕನ್ನಡ ಸಮಾಜ ಪ್ರಜ್ಞಾವಂತ ನಾಗರಿಕ ಸಮಿತಿ ಸಂಸ್ಥಾಪಕ ಎಸ್.ಆನಂದ್ ನ್ಯಾಯಾಲಯಕ್ಕೆ ದೂರು ಸಲ್ಲಿಸಿದ್ದಾರೆ.

ಆನಂದ್ ಸಲ್ಲಿಸಿದ್ದ ದೂರನ್ನು ಮಂಗಳವಾರ (ಏ.23) ಮಾನ್ಯ ಮಾಡಿ ವಿಚಾರಣೆಗೆ ಸ್ವೀಕರಿಸಿರುವ ನ್ಯಾಯಾಲಯ, ಐಪಿಸಿ ಕಲಂ 181 ಸುಳ್ಳು ಮಾಹಿತಿ ಮೇಲೆ ಪ್ರಮಾಣವಚನ ಸ್ವೀಕಾರ ಮತ್ತು ಪ್ರಜಾಪ್ರತಿನಿಧಿ ಕಾಯಿದೆ ಕಲಂ 125(ಎ) ಚುನಾವಣೆ ಅಫಿಡವಿಟ್‌ನಲ್ಲಿ ಸುಳ್ಳು ಮಾಹಿತಿ ನೀಡಿರುವ ಆರೋಪದ ಮೇರೆಗೆ ದೂರು ದಾಖಲಿಸಿಕೊಂಡಿದೆ. ವಿಚಾರಣೆಯನ್ನು ಮೇ 2ಕ್ಕೆ ಮುಂದೂಡಿದೆ. ಅಂದು ದೂರುದಾರ ಆನಂದ ಹೇಳಿಕೆಯನ್ನು ನ್ಯಾಯಾಲಯ ದಾಖಲಿಸಿಕೊಳ್ಳಲಿದೆ.